ದೂರವಾಣಿ ಸಂಖ್ಯೆ: 080–22212343
ಫ್ಯಾಕ್ಸ್ ಸಂಖ್ಯೆ: 080–22278803

ಅಂತರ್ಜಾಲ: https://kptcl.karnataka.gov.in
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್) : ಯು40109ಕೆಎ1999ಎಸ್‌ಜಿ025521**
**(ಕಂಪನಿಯ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು–560 009)**

**ಸಂಖ್ಯೆ : ಕವಿಪ್ರನಿನಿ/ಬಿ103/25307/2021–22** **ದಿನಾಂಕ : 28 DEC 2021**

## ಸುತ್ತೋಲೆ

**ವಿಷಯ :** ಸೇವೆಯಲ್ಲಿರುವಾಗಲೇ ನಿಧನ ಹೊಂದಿದ ನೌಕರರ ಅವಲಂಬಿತರಿಗೆ ಅನುಕಂಪ ಆಧಾರದ ನೇಮಕಾತಿ ನೀಡುವಂತೆ ಕೋರಿ ಸಲ್ಲಿಸಲಾಗಿರುವ ಪ್ರಸ್ತಾವನೆಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವ ಬಗ್ಗೆ.

**ಉಲ್ಲೇಖ:**
1. ಮಂಡಳಿ ಅಧಿಸೂಚನೆ ಸಂಖ್ಯೆ: ಕವಿಮಂ/ಬಿ5/721/80–81, ದಿನಾಂಕ: 17.04.1997.
2. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ5/721/80–81, ದಿನಾಂಕ: 23.09.2011.
3. ಕರ್ನಾಟಕದ ಮಾನ್ಯ ಉಚ್ಛ ನ್ಯಾಯಾಲಯ ಬೆಂಗಳೂರು ರಿಟ್ ಅರ್ಜಿ ಸಂಖ್ಯೆ: 9564/2021 ಅನ್ನು ಇತ್ಯರ್ಥಪಡಿಸಿ, ಹೊರಡಿಸಿರುವ ದಿನಾಂಕ: 12.07.2021 ರ ಆದೇಶ.
4. ನಿಗಮದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ103/20303/2021–22, ದಿನಾಂಕ: 08.11.2021.
5. ನೌಕರರ ಕುಂದು–ಕೊರತೆಗಳ ಪರಿಹಾರದ ಬಗ್ಗೆ ಕವಿಪ್ರನಿ ನೌಕರರ ಸಂಘದೊಡನೆ ನಡೆದ ದಿನಾಂಕ: 07.10.2021 ರಂದು ನಡೆದ ಸಭೆಯ ನಡವಳಿ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸೇವೆಯಲ್ಲಿರುವಾಗಲೇ ನಿಧನ ಹೊಂದಿದ ನಿಗಮದ ನೌಕರರ ಅವಲಂಬಿತ ಕುಟುಂಬದ ಅರ್ಹ ಅಭ್ಯರ್ಥಿಯು ನಿಗಧಿತ ಕಾಲಾವಧಿಯೊಳಗೆ ಪೂರ್ಣ ಪ್ರಮಾಣದ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ, ಸಾಧ್ಯವಾದಷ್ಟು ಮೂರು ತಿಂಗಳ ಅವಧಿಯೊಳಗೆ ಅರ್ಜಿದಾರರಿಗೆ ಅನುಕಂಪ ಆಧಾರದ ನೇಮಕಾತಿ ನೀಡುವಂತೆ ಉಲ್ಲೇಖ–1 ರ ಆದೇಶದ ಕಂಡಿಕೆ–6(2) ರಲ್ಲಿ ತಿಳಿಸಲಾಗಿರುತ್ತದೆ.

ಉಲ್ಲೇಖ–2 ರ ಸುತ್ತೋಲೆ ಅನ್ವಯ ಅನುಕಂಪ ಆಧಾರದ ನೇಮಕಾತಿಯನ್ನು ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳ ಕಾರ್ಯ ಮತ್ತು ಪಾಲನಾ ವೃತ್ತದ ಅಧೀಕ್ಷಕ ಇಂಜಿನಿಯರ್(ವಿ) ಇವರ ಕಚೇರಿಯಿಂದ ನಿರ್ವಹಿಸಲಾಗುತ್ತಿದೆ. ಆದಾಗ್ಯೂ, ಇತ್ತೀಚಿನ ದಿನಗಳಲ್ಲಿ ಅನುಕಂಪ ಆಧಾರದ ನೇಮಕಾತಿಗಾಗಿ ಸಲ್ಲಿಸಿರುವ ಅರ್ಜಿಗಳನ್ನು ಆದ್ಯತೆಯ ಮೇರೆಗೆ ಇತ್ಯರ್ಥಗೊಳಿಸುವಲ್ಲಿ ವಿಳಂಬ ಉಂಟಾಗುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ.

ಅನುಕಂಪ ಆಧಾರದ ನೇಮಕಾತಿ ವಿಷಯದಲ್ಲಿ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 9564/2021 ರಲ್ಲಿ ದಿನಾಂಕ: 12.07.2021 ರಲ್ಲಿ ಈ ಕೆಳಗಿನಂತೆ ಗಮನಿಸಿರುತ್ತದೆ:

*"Therefore, if giving of an application within one year is held to be mandatory and binding on the applicant in terms of Rule 5, so would be sub-Rule (2) of Rule 6 upon the State and its instrumentalities. Though the Rule employs the words 'as far as possible' it is preceded by the word "shall". Looking at the mandatory duty cast upon the applicant to file an application within one year from the date of death of the bread winner, the same duty is required to be mandatorily followed by the State in terms of sub-rule (2) of Rule-6 in the wake of the object of framing the rule and the duty that enjoins such object. Therefore, the Rule that directs appointment shall be made as far as possible within a period of three months cannot but be held to be mandatory. Therefore, the authority empowered to consider applications for compassionate appointment shall consider and dispose the same within the mandate*

*of sub- Rule (2) of Rule 6 i.e., three months from the date of receipt of the application. Any unreasoned or unjustifiable delay on the part of the Authority competent to consider would make such Authority personally responsible to pay damages to such applicant by way of wages that the applicant would be entitled to, if an appointment had been considered and granted."*

ಮುಂದುವರೆದು, ಸದರಿ ರಿಟ್ ಅರ್ಜಿಯನ್ನು ಪುರಸ್ಕರಿಸುತ್ತಾ, ಈ ಕೆಳಕಂಡಂತೆ ಆದೇಶಿಸಿರುತ್ತದೆ:

*"(i) Writ Petition is allowed.*

*(ii) Impugned endorsement dated 23-12-2020 (Annexure-A) is quashed.*

*(iii) Mandamus is issued to the respondents to reconsider the case of the 1st petitioner for appointment on compassionate grounds in terms of sub-rule (4) of Rule 4 of the Rules, bearing in mind the observations made in the course of this order and pass appropriate orders in accordance with law, within a period of eight weeks from the date of receipt of a copy of this order, failing which, the 1st petitioner would be entitled to monthly salary in lowest post of Group- C till such consideration, to be paid by the authority competent to consider and pass orders as his personal responsibility."*

ಈ ಮೇಲೆ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ ಅನುಕಂಪ ಆಧಾರದ ನೇಮಕಾತಿಗೆ ಸ್ವೀಕರಿಸಲಾಗಿರುವ ಅರ್ಜಿಗಳನ್ನು ನಿಯಮಾನುಸಾರ ನಿಗಮದಿಂದ ಕಾಲಕಾಲಕ್ಕೆ ಹೊರಡಿಸಲಾಗಿರುವ ಆದೇಶ/ಮಾರ್ಗಸೂಚಿಗಳನ್ವಯ ಪರಿಶೀಲಿಸಿ, ಆದ್ಯತೆಯ ಮೇರೆಗೆ ಅರ್ಜಿ ಸ್ವೀಕರಿಸಿದ ಮೂರು ತಿಂಗಳೊಳಗಾಗಿ ಇತ್ಯರ್ಥಗೊಳಿಸುವಂತೆ ಎಲ್ಲಾ ನೇಮಕಾತಿ ಪ್ರಾಧಿಕಾರಿಗಳಿಗೆ ಈ ಮೂಲಕ ತಿಳಿಸಲಾಗಿದೆ.

ಆದಾಗ್ಯೂ, ಅನುಕಂಪ ಆಧಾರದ ನೇಮಕಾತಿ ನೀಡುವ ವಿಷಯದಲ್ಲಿ ವಿಳಂಬ ಉಂಟಾಗಿ, ನ್ಯಾಯಾಲಯದಿಂದ ತತ್ಸಂಬಂಧ ಯಾವುದಾದರೂ ವ್ಯತಿರಿಕ್ತ ಆದೇಶ ಹೊರಡಿಸಿದಲ್ಲಿ, ಅಂತಹ ಪ್ರಕರಣಗಳಲ್ಲಿ ಸಂಬಂಧಪಟ್ಟ ವೃತ್ತಾಧಿಕಾರಿಗಳು ಮತ್ತು ವಿಭಾಗಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**

**<u>ಗೆ</u> :**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಕವಿಪ್ರನಿನಿ/ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ ನಿರ್ದೇಶಕರು (ಪ್ರಸರಣ)/ ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

https://kptcl.karnataka.gov.in/ for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ</u> :**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.

2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.